ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೧ Volume - 161	ಬೆಂಗಳೂರು, ಗುರುವಾರ, ೧೨, ಫೆಬ್ರವರಿ, ೨೦೨೬ (ಮಾಘ , ೨೩, ಶಕವರ್ಷ, ೧೯೪೭) BENGALURU, THURSDAY, 12, FEBRUARY, 2026 (MAGHA , 23, SHAKAVARSHA, 1947)	ಸಂಚಿಕೆ ೩೦ Issue 30

ಭಾಗ ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಯಚೂರು ಜಿಲ್ಲೆಯ ಮಸ್ಕಿ ಕಂದಾಯ ತಾಲ್ಲೂಕಿಗೆ ಹೊಸದಾಗಿ ಒಂದು (01) ನೋಟರಿ ಹುದ್ದೆಯನ್ನು ಸೃಜಿಸುವ ಬಗ್ಗೆ.

ಓದಲಾಗಿದೆ:

1. ಮಾಜಿ ಸದಸ್ಯರು, ಕರ್ನಾಟಕ ವಿಧಾನ ಪರಿಷತ್, ಈಶಾನ್ಯ ಶಿಕ್ಷಕರ ಕ್ಷೇತ್ರ (ಕಲಬುರ್ಗಿ), ರಾಯಚೂರು ಇವರ ಮನವಿ.
2. ಮಾನ್ಯ ಶಾಸಕರು, ಮಸ್ಕಿ ವಿಧಾನಸಭಾ ಕ್ಷೇತ್ರ, ರಾಯಚೂರು ಜಿಲ್ಲೆ ಇವರ ಮನವಿ ದಿನಾಂಕ : 09-12-2025.
3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಯಚೂರು ಜಿಲ್ಲೆ ಇವರ ಕಛೇರಿ ಪತ್ರ ಸಂಖ್ಯೆ: 253/ಆಡಳಿತ/2026, ದಿನಾಂಕ : 20-01-2026.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ: (1) & (2)ರ ಮನವಿಗಳಲ್ಲಿ ತಮ್ಮ ಮತಕ್ಷೇತ್ರವು ಡಾ|| ನಂಜುಂಡಪ್ಪ ವರದಿಯನ್ವಯ ಅತೀ ಹಿಂದುಳಿದ ಪ್ರದೇಶವಾಗಿದ್ದು, ಕ್ಷೇತ್ರದ ವ್ಯಾಪ್ತಿಯಲ್ಲಿ ಮಸ್ಕಿಯು ನೂತನ ಕಂದಾಯ ತಾಲ್ಲೂಕು ಕೇಂದ್ರವಾಗಿರುವುದರಿಂದ, ಹೊಸದಾಗಿ ನೋಟರಿ ಹುದ್ದೆಯನ್ನು ಮಂಜೂರು ಮಾಡಬೇಕೆಂದು ಹಾಗೂ ಮಸ್ಕಿ ತಾಲ್ಲೂಕಿನ ಸಾರ್ವಜನಿಕರು ದಾಖಲೆಗಳಿಗೆ ನೋಟರೈಸ್ ಮಾಡಿಸಲು ಸುಮಾರು 30 ಕಿ.ಮೀ. ದೂರದಲ್ಲಿರುವ ಲಿಂಗಸುಗೂರು ಅಥವಾ ಸಿಂಧನೂರು ತಾಲ್ಲೂಕಿಗೆ ಹೋಗಬೇಕಾಗಿರುವುದರಿಂದ ರಾಯಚೂರು ಜಿಲ್ಲೆಯ ಮಸ್ಕಿ ಕಂದಾಯ ತಾಲ್ಲೂಕಿಗೆ ನೋಟರಿಯನ್ನು ನೇಮಕ ಮಾಡುವಂತೆ ಮನವಿಯಲ್ಲಿ ಕೋರಿರುತ್ತಾರೆ.

ರಾಯಚೂರು ಜಿಲ್ಲೆಯ ಮಸ್ಕಿ ಕಂದಾಯ ತಾಲ್ಲೂಕಿಗೆ ಹೊಸದಾಗಿ ನೋಟರಿ ಹುದ್ದೆಯನ್ನು ಸೃಜಿಸವ ಬಗ್ಗೆ ಪರಿಶೀಲಿಸಲು, ಕೆಲವು ಮಾಹಿತಿಯನ್ನು ಹಾಗೂ ಅಭಿಪ್ರಾಯವನ್ನು ತಿಳಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಯಚೂರು ಜಿಲ್ಲೆ ಇವರನ್ನು ಕೋರಲಾಗಿರುತ್ತದೆ. ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ದಿನಾಂಕ : 20-01-2026ರ ಪತ್ರದಲ್ಲಿ ಮಸ್ಕಿ ತಾಲ್ಲೂಕಿನಲ್ಲಿ ಸಂಚಾರಿ ಸಿವಿಲ್ ನ್ಯಾಯಾಲಯ ವಾರದಲ್ಲಿ ಎರಡು ದಿನ ಪೀಠಾಸೀನ ಇರುವುದರಿಂದ ಅಲ್ಲಿ ಯಾರು ನೋಟರಿಯವರು ಇರದ ಕಾರಣ ವಕೀಲರಿಗೆ ನೋಟರಿಯ ಸಲುವಾಗಿ ಸಿಂಧನೂರು ಅಥವಾ ಲಿಂಗಸೂಗುರಿಗೆ ಹೋಗಬೇಕಾದ ಅವಶ್ಯಕತೆ ಇರುತ್ತದೆ ಮತ್ತು ನ್ಯಾಯಾಲಯ ಬಿಟ್ಟು ಬೇರೆ ಎಲ್ಲಾ ತಾಲ್ಲೂಕ ಕಚೇರಿಗಳು ಕಾರ್ಯ ನಿರ್ವಹಿಸುತ್ತರುವುದರಿಂದ ಮಸ್ಕಿ ತಾಲ್ಲೂಕಿಗೆ ನೋಟರಿಗಳ ಅವಶ್ಯಕತೆ ಇರುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಯಚೂರು ಜಿಲ್ಲೆ ಇವರು ಅಭಿಪ್ರಾಯ ತಿಳಿಸಿರುತ್ತಾರೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಯಚೂರು ಜಿಲ್ಲೆ ಇವರ ಅಭಿಪ್ರಾಯ ಹಾಗೂ ಮಸ್ಕಿ ಕಂದಾಯ ತಾಲ್ಲೂಕಿನಲ್ಲಿ ಹೆಚ್ಚುತ್ತಿರುವ ಜನಸಂಖ್ಯೆಗನುಗುಣವಾಗಿ ನೋಟರಿಗಳ ನಿಯಮಗಳು, 1956ರ

ನಿಯಮ 8(4A) ರನ್ವಯ ಮಸ್ಕಿ ಕಂದಾಯ ತಾಲ್ಲೂಕಿಗೆ ಸಾರ್ವಜನಿಕ ಹಿತಾಸಕ್ತಿ ಹಾಗೂ ಆಡಳಿತ ಹಿತದೃಷ್ಟಿಯಿಂದ ಹೊಸದಾಗಿ ನೋಟರಿ ಹುದ್ದೆಯನ್ನು ಸೃಜಿಸುವ ಬಗ್ಗೆ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಲಾ - ಎಲ್‌ಸಿಎಲ್/302/2025,
ಬೆಂಗಳೂರು, ದಿನಾಂಕ : 09-02-2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಯಚೂರು ಜಿಲ್ಲೆಯ ಮಸ್ಕಿ ಕಂದಾಯ ತಾಲ್ಲೂಕಿಗೆ ಹೊಸದಾಗಿ ಒಂದು (01) ನೋಟರಿ ಹುದ್ದೆಯನ್ನು ಸೃಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆದಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು
ಮಾನವ ಹಕ್ಕುಗಳ ಇಲಾಖೆ (ಆಡಳಿತ-2).

PR-31

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ರಾಯಚೂರು ಜಿಲ್ಲೆಯ ದೇವದುರ್ಗ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಎರಡು (02) ನೋಟರಿ ಹುದ್ದೆಗಳನ್ನು ಸೃಜಿಸುವ ಬಗ್ಗೆ.

ಓದಲಾಗಿದೆ:

1. ಕಡತ ಸಂಖ್ಯೆ: ಲಾ-ಎಲ್‌ಸಿಎಲ್/339/2025.
2. ಸರ್ಕಾರದ ಪತ್ರ ಸಂಖ್ಯೆ: ಲಾ-ಎಲ್‌ಸಿಎಲ್/339/2025, ದಿನಾಂಕ:06-01-2026.
3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಯಚೂರು ಜಿಲ್ಲೆರವರ ಕಛೇರಿ ಪತ್ರ ಸಂಖ್ಯೆ: 252/ಆಡಳಿತ/2026, ದಿನಾಂಕ:20-01-2026.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಕಡತದಲ್ಲಿ ರಾಯಚೂರು ಜಿಲ್ಲೆಯ ದೇವದುರ್ಗ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಎರಡು ನೋಟರಿ ಹುದ್ದೆಗಳನ್ನು ಸೃಜಿಸಲು ಪ್ರಸ್ತಾಪಿಸಿಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಪತ್ರದಲ್ಲಿ ರಾಯಚೂರು ಜಿಲ್ಲೆಯ ದೇವದುರ್ಗ ಕಂದಾಯ ತಾಲ್ಲೂಕಿಗೆ ಹೆಚ್ಚುವರಿ ನೋಟರಿ ಹುದ್ದೆ ಸೃಜಿಸುವ ಬಗ್ಗೆ ಪರಿಶೀಲಿಸಲು ಕೆಲವು ಅಂಶಗಳಿಗೆ ಮಾಹಿತಿ / ಅಭಿಪ್ರಾಯವನ್ನು ತಿಳಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಯಚೂರು ಜಿಲ್ಲೆ ಇವರನ್ನು ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ದಿನಾಂಕ :20-01-2026ರ ಪತ್ರದಲ್ಲಿ ದೇವದುರ್ಗ ತಾಲ್ಲೂಕಿನಲ್ಲಿ ಪ್ರಸ್ತುತ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಸಿವಿಲ್ ನ್ಯಾಯಾಲಯಗಳೆರಡು ಕಾರ್ಯ ನಿರ್ವಹಿಸುತ್ತಿದ್ದು, ಬೇರೆಡೆ ಸ್ಥಳಾಂತರಗೊಂಡಿದ್ದರಿಂದ ಉಪ ನೋಂದಣಿ ಕಛೇರಿ, ತಹಶೀಲ ಕಛೇರಿ ಪುರಸಭೆ ಕಾರ್ಯಾಲಯಗಳು ಒಂದೇ ಕಡೆ ಇದ್ದು ಮತ್ತು ವಕೀಲರ ಸಂಖ್ಯೆಯು ಹೆಚ್ಚಾಗಿದ್ದರಿಂದ, ಇನ್ನೂ ಎರಡು ಅಥವಾ ಮೂರು ನೋಟರಿಗಳನ್ನು ಸೃಜಿಸುವುದು ಅವಶ್ಯವಿರುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಯಚೂರು ಜಿಲ್ಲೆ ಇವರು ಅಭಿಪ್ರಾಯ ತಿಳಿಸಿರುತ್ತಾರೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಯಚೂರು ಜಿಲ್ಲೆ ಇವರ ಅಭಿಪ್ರಾಯದನ್ವಯ ನೋಟರಿಗಳ ನಿಯಮಗಳು, 1956ರ ನಿಯಮ 8(4A) ರನ್ವಯ ಹೆಚ್ಚುವರಿ ನೋಟರಿ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಲಾ - ಎಲ್‌ಸಿಎಲ್/339/2025,</u>
<u>ಬೆಂಗಳೂರು, ದಿನಾಂಕ : 10-02-2026</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಯಚೂರು ಜಿಲ್ಲೆಯ ದೇವದುರ್ಗ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಎರಡು (02) ನೋಟರಿ ಹುದ್ದೆಗಳನ್ನು ಸೃಜಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆದಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು
ಮಾನವ ಹಕ್ಕುಗಳ ಇಲಾಖೆ (ಆಡಳಿತ-2).

PR-32

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಾವೇರಿ ಜಿಲ್ಲೆಯ ಶಿಗ್ಗಾಂವ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು (01) ನೋಟರಿ ಹುದ್ದೆಯನ್ನು ಸೃಜಿಸುವ ಬಗ್ಗೆ.

<u>ಓದಲಾಗಿದೆ</u>:

1. ಕಡತ ಸಂಖ್ಯೆ: ಲಾ-ಎಲ್‌ಸಿಎಲ್/353/2025.
2. ಸರ್ಕಾರದ ಪತ್ರ ಸಂಖ್ಯೆ: ಲಾ-ಎಲ್‌ಸಿಎಲ್/353/2025, ದಿನಾಂಕ : 06-01-2026.
3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ ಜಿಲ್ಲೆ ರವರ ಕಛೇರಿ ಪತ್ರ ಸಂಖ್ಯೆ: ಆಡಳಿತ/422/2026, ದಿನಾಂಕ : 28-01-2026.

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಕಡತದಲ್ಲಿ ಹಾವೇರಿ ಜಿಲ್ಲೆಯ ಶಿಗ್ಗಾಂವ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು ನೋಟರಿ ಹುದ್ದೆಯನ್ನು ಸೃಜಿಸಲು ಪ್ರಸ್ತಾಪಿಸಿಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಪತ್ರದಲ್ಲಿ ಹಾವೇರಿ ಜಿಲ್ಲೆಯ ಶಿಗ್ಗಾಂವ ಕಂದಾಯ ತಾಲ್ಲೂಕಿಗೆ ಹೆಚ್ಚುವರಿ ನೋಟರಿ ಹುದ್ದೆ ಸೃಜಿಸುವ ಬಗ್ಗೆ ಪರಿಶೀಲಿಸಲು ಕೆಲವು ಅಂಶಗಳಿಗೆ ಮಾಹಿತಿ / ಅಭಿಪ್ರಾಯವನ್ನು ತಿಳಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ ಜಿಲ್ಲೆ ಇವರನ್ನು ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ದಿನಾಂಕ : 28-01-2025ರ ಪತ್ರದಲ್ಲಿ ಶಿಗ್ಗಾಂವ ಕಂದಾಯ ತಾಲ್ಲೂಕಿಗೆ ಸೃಷ್ಟಿಸಲಾಗಿರುವ ನೋಟರಿ ಹುದ್ದೆಗಳಲ್ಲಿ ಅರ್ಧ ಜನ ತಾಲ್ಲೂಕಿನಲ್ಲಿ ಕೆಲಸ ನಿರ್ವಹಿಸುತ್ತಿದ್ದು ಮತ್ತು ಉಳಿದವರು ನ್ಯಾಯಾಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವುದರಿಂದ, ಶಿಗ್ಗಾಂವ ತಾಲ್ಲೂಕಿನ ಜನಸಂಖ್ಯೆಗೆ ಅನುಗುಣವಾಗಿ ಹುದ್ದೆಯು

ಬೇಕಾಗಿದ್ದರಿಂದ ನೋಟರಿ ಹುದ್ದೆ ಸೃಜಿಸುವ ಅವಶ್ಯಕತೆ ಇರುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ ಜಿಲ್ಲೆ ಇವರು ಅಭಿಪ್ರಾಯ ತಿಳಿಸಿರುತ್ತಾರೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ ಜಿಲ್ಲೆ ಇವರ ಅಭಿಪ್ರಾಯದನ್ವಯ ನೋಟರಿಗಳ ನಿಯಮಗಳು, 1956ರ ನಿಯಮ 8(4A) ರನ್ವಯ ಹೆಚ್ಚುವರಿ ನೋಟರಿ ಹುದ್ದೆಯನ್ನು ಸೃಜಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಲಾ - ಎಲ್‌ಸಿಎಲ್/353/2025,</u>
<u>ಬೆಂಗಳೂರು, ದಿನಾಂಕ : 09-02-2026</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಾವೇರಿ ಜಿಲ್ಲೆಯ ಶಿಗ್ಗಾಂವ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು (01) ನೋಟರಿ ಹುದ್ದೆಯನ್ನು ಸೃಜಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆದಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು
ಮಾನವ ಹಕ್ಕುಗಳ ಇಲಾಖೆ (ಆಡಳಿತ-2).

PR-33

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ದಾವಣಗೆರೆ ಜಿಲ್ಲೆಯ ಹರಿಹರ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು (01) ನೋಟರಿ ಹುದ್ದೆಯನ್ನು ಸೃಜಿಸುವ ಬಗ್ಗೆ.

<u>ಓದಲಾಗಿದೆ</u>:

1. ಕಡತ ಸಂಖ್ಯೆ: ಲಾ-ಎಲ್‌ಸಿಎಲ್/239/2025.
2. ಸರ್ಕಾರದ ಪತ್ರ ಸಂಖ್ಯೆ: ಲಾ-ಎಲ್‌ಸಿಎಲ್/239/2025, ದಿನಾಂಕ : 14-08-2025.
3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ ಜಿಲ್ಲೆ ರವರ ಕಛೇರಿ ಪತ್ರ ಸಂಖ್ಯೆ: ಡಿಜೆ.ಡಿವಿಜಿ.5296/2025, ದಿನಾಂಕ : 16-12-2025.

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಕಡತದಲ್ಲಿ ದಾವಣಗೆರೆ ಜಿಲ್ಲೆಯ ಹರಿಹರ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು ನೋಟರಿ ಹುದ್ದೆಯನ್ನು ಸೃಜಿಸಲು ಪ್ರಸ್ತಾಪಿಸಿಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಪತ್ರದಲ್ಲಿ ದಾವಣಗೆರೆ ಜಿಲ್ಲೆಯ ಹರಿಹರ ಕಂದಾಯ ತಾಲ್ಲೂಕಿಗೆ ಹೆಚ್ಚುವರಿ ನೋಟರಿ ಹುದ್ದೆ ಸೃಜಿಸುವ ಬಗ್ಗೆ ಪರಿಶೀಲಿಸಲು ಕೆಲವು ಅಂಶಗಳಿಗೆ ಮಾಹಿತಿ / ಅಭಿಪ್ರಾಯವನ್ನು ತಿಳಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ ಜಿಲ್ಲೆ ಇವರನ್ನು ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ದಿನಾಂಕ : 16-12-2025ರ ಪತ್ರದಲ್ಲಿ ದಾವಣಗೆರೆ ಜಿಲ್ಲೆಯ ಹರಿಹರದಲ್ಲಿ ಒಟ್ಟು 4 ನ್ಯಾಯಾಲಯಗಳು ಕಾರ್ಯ ನಿರ್ವಹಿಸುತ್ತಿದ್ದು, ಎಲ್ಲಾ ನ್ಯಾಯಾಲಯಗಳಿಂದ ಸೇರಿ ಒಟ್ಟು 5954 ಪ್ರಕರಣಗಳು ಬಾಕಿ ಇದ್ದು, ಒಟ್ಟು 260 ನ್ಯಾಯವಾದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ವರದಿ ಮಾಡುತ್ತಾ, ಸದರಿ ಸಂಖ್ಯೆಗಳನ್ನು

ಪರಿಗಣಿಸಿದಾಗ ನೋಟರಿ ಹುದ್ದೆ ಸೃಜಿಸುವ ಅವಶ್ಯಕತೆ ಇರುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ ಜಿಲ್ಲೆ ಇವರು ಅಭಿಪ್ರಾಯ ತಿಳಿಸಿರುತ್ತಾರೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ ಜಿಲ್ಲೆ ಇವರ ಅಭಿಪ್ರಾಯದನ್ವಯ ನೋಟರಿಗಳ ನಿಯಮಗಳು, 1956ರ ನಿಯಮ 8(4A) ರನ್ವಯ ಹೆಚ್ಚುವರಿ ನೋಟರಿ ಹುದ್ದೆಯನ್ನು ಸೃಜಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಲಾ - ಎಲ್‌ಸಿಎಲ್/239/2025,
ಬೆಂಗಳೂರು, ದಿನಾಂಕ : 09-02-2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಾವಣಗೆರೆ ಜಿಲ್ಲೆಯ ಹರಿಹರ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು (01) ನೋಟರಿ ಹುದ್ದೆಯನ್ನು ಸೃಜಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆದಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು
ಮಾನವ ಹಕ್ಕುಗಳ ಇಲಾಖೆ (ಆಡಳಿತ-2).

PR-34

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರಜಾ ಸಂಸ್ಥೆ, ರಾಣಾ ಸಿಂಗ್ ಪೇಟೆ , ಬೆಂಗಳೂರು ಈ ಸಂಘಕ್ಕೆ ನೇಮಿಸಿರುವ ಆಡಳಿತಾಧಿಕಾರಿಯನ್ನು ಬದಲಾಯಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ:ಸಿಒ 11 ಸಸಂನೋ 2016, ದಿನಾಂಕ:07-09-2019

2. ಆಡಳಿತಾಧಿಕಾರಿ, ಪ್ರಜಾ ಸಂಸ್ಥೆ, ರಾಣಾಸಿಂಗ್ ಪೇಟೆ (ರಿ), ಬೆಂಗಳೂರು ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರು, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರ ಕಛೇರಿ ಪತ್ರ ಸಂಖ್ಯೆ: ಎಆರ್‌ಬಿ-2(45)/ಸ.ಸಂ./ಆಡಳಿತಾಧಿಕಾರಿ/01/2025-26, ದಿನಾಂಕ: 26-12-2025.

****

ಪ್ರಸ್ತಾವನೆ

ಮೇಲೆ ಓದಲಾದ ಕ್ರ.ಸಂ. (1) ರ ಸರ್ಕಾರದ ಆದೇಶದಲ್ಲಿ, ಪ್ರಜಾ ಸಂಸ್ಥೆ ರಾಣಾಸಿಂಗ್ ಪೇಟೆ, ಈ ಸಂಘಕ್ಕೆ ಸಹಕಾರ ಸಂಘಗಳ ಸಹಾಯಕ ನಿಬಂಧಕರು, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ, ಇವರನ್ನು ಆಡಳಿತಾಧಿಕಾರಿಯನ್ನಾಗಿ ನೇಮಿಸಲಾಗಿತ್ತು. ನಂತರ ಕಾಲಕಾಲಕ್ಕೆ ಅವಧಿಯನ್ನು ವಿಸ್ತರಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ (2) ರ ಪ್ರಸ್ತಾವನೆಯಲ್ಲಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಉಪ ನಿಬಂಧಕರ ಕಛೇರಿ, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರು ಆಡಳಿತಾಧಿಕಾರಿಯನ್ನು ನೇಮಿಸಿದ್ದಾಗಿನಿಂದ ಆಗಿರುವ ಘಟನಾವಳಿಗಳ ವರದಿ ಸಲ್ಲಿಸಿ, ತಾವು

ತಮ್ಮ ಕಛೇರಿಯ ದೈನಂದಿನ ಕೆಲಸದ ಜೊತೆಗೆ ಇತರೆ 06 ವಿಚಾರಣೆ, ಪ್ರಭಾರ ಹಾಗೂ ವಸೂಲಾಧಿಕಾರಿಯ ಕರ್ತವ್ಯಗಳನ್ನು ನಿಭಾಯಿಸುತ್ತಿದ್ದು, ಈ ಎಲ್ಲಾ ಜವಾಬ್ದಾರಿಗಳ ಜೊತೆಗೆ ಸಂಘದ ಆಡಳಿತಾಧಿಕಾರಿ ಹುದ್ದೆಯ ಕರ್ತವ್ಯ ನಿರ್ವಹಿಸಿಕೊಂಡು ಹೋಗಲು ಕಷ್ಟಸಾಧ್ಯವಾಗಿರುತ್ತದೆ ಹಾಗೂ ಕೆಲಸದ ಹೆಚ್ಚಿನ ಒತ್ತಡದಿಂದ ಆರೋಗ್ಯದಲ್ಲಿ ತೊಂದರೆ ಉಂಟಾಗಿರುವ ಕಾರಣ ಪ್ರಜಾ ಸಂಸ್ಥೆ, ರಾಣಾಸಿಂಗ್ ಪೇಟೆ, ಈ ಸಂಘದ ಆಡಳಿತಾಧಿಕಾರಿಯನ್ನು ಬದಲಾಯಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 113 ಸಿಎಸ್‌ಆರ್ 2022,

ಬೆಂಗಳೂರು, ದಿನಾಂಕ:17ನೇ ಜನವರಿ 2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರಜಾ ಸಂಸ್ಥೆ, ರಾಣಾಸಿಂಗ್ ಪೇಟೆ, ಬೆಂಗಳೂರು ಈ ಸಂಸ್ಥೆಗೆ ಆಡಳಿತಾಧಿಕಾರಿಯಾಗಿ ನೇಮಕವಾಗಿದ್ದ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಉಪ ನಿಬಂಧಕರ ಕಛೇರಿ, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಆಡಳಿತಾಧಿಕಾರಿಯನ್ನಾಗಿ ನೇಮಿಸಿರುವುದನ್ನು ಬದಲಾಯಿಸಿ, ಸದರಿ ಸಂಸ್ಥೆಗೆ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಉಪ ನಿಬಂಧಕರ ಕಛೇರಿ, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಅಧಿಕಾರ ವಹಿಸಿಕೊಳ್ಳತಕ್ಕದ್ದು ಹಾಗೂ ಸಂಘದಲ್ಲಿನ ನ್ಯೂನತೆಗಳನ್ನು ನಿಯಮಾನುಸಾರ ಸರಿಪಡಿಸಿ ಸಂಘಕ್ಕೆ ಚುನಾವಣೆ ನಡೆಸಿ, ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ನೀಡಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(**ರಂಗನಾಥ.ಜಿ**)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಹಕಾರ ಇಲಾಖೆ

PR-35

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ವಿದ್ಯುಚ್ಛಕ್ತಿ ಮಂಡಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ ಕೇಂದ್ರ ಸಮಿತಿ, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :- ಸಹಕಾರ ಸಂಘಗಳ ನಿಬಂಧಕರ ಕಛೇರಿಯ ಪತ್ರ ಸಂ.:ಜಂನಿ/ಐಸಿಡಿಪಿ/ಸಂ.ಸಂ-02/79/2024-25, ದಿನಾಂಕ:07.01.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ಮಂಡಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ ಕೇಂದ್ರ ಸಮಿತಿ ಕೆ.ಆರ್.ವ್ಯತ್ತ, ಬೆಂಗಳೂರು-560001 ಈ ಸಂಘದ ಕಾರ್ಯಕಾರಿ ಸಮಿತಿಗೆ ಚುನಾವಣೆಯನ್ನು ಬೈಲಾ ರೀತ್ಯಾ ನಡೆಸಲು ಶ್ರೀ ಎನ್ ಚಂದ್ರಶೇಖರ್, ಸಹಕಾರ ಅಭಿವೃದ್ಧಿ ಅಧಿಕಾರಿ, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಚುನಾವಣಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದ್ದು, ಸದರಿ ಆದೇಶದಂತೆ ಚುನಾವಣಾಧಿಕಾರಿಗಳು ಸಂಘದ ಕಾರ್ಯಕಾರಿ ಮಂಡಲಿಗೆ ಚುನಾವಣೆಯನ್ನು ನಡೆಸುವ ಸಂಬಂಧ ಕೆಳಕಂಡಂತೆ ವರದಿಯನ್ನು ಸಲ್ಲಿಸಿರುವುದಾಗಿ ಜಿಲ್ಲಾ ನೋಂದಣಾಧಿಕಾರಿಗಳು ತಿಳಿಸಿರುತ್ತಾರೆ.

ಸಂಸ್ಥೆಯ ಕೋರಿಕೆಯಂತೆ ಸಂಘದ ಹಾಲಿ ಕಾರ್ಯಕಾರಿ ಸಮಿತಿಯ ಅವಧಿಯು ದಿನಾಂಕ:27-01-2026 ರಂದು ಮುಕ್ತಾಯವಾಗುವುದರಿಂದ ಚುನಾವಣಾ ಪ್ರಕ್ರಿಯೆಗಳನ್ನು ಪ್ರಾರಂಭಿಸುವ ಸಂಬಂಧ ದಿನಾಂಕ:02-01-2026 ರಂದು ಸಂಘಕ್ಕೆ ಚುನಾವಣಾಧಿಕಾರಿಗಳು ಭೇಟಿ ನೀಡಿರುವ ಸಮಯದಲ್ಲಿ ಸಂಘದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಾದ ಶ್ರೀ ನಾಗೇಶ ಮತ್ತು ಶ್ರೀ ವೀರೇಶ್ ಡಿ ಇವರುಗಳು ಉಪಸ್ಥಿತರಿದ್ದು, ಇವರು ಸಹ ಸಂಸ್ಥೆಯ ಕಾರ್ಯಕಾರಿ ಸಮಿತಿಯ ಅವಧಿಯು ದಿನಾಂಕ:27-01-2026 ರಂದು ಅಂತ್ಯಗೊಳ್ಳುವುದರಿಂದ ಸಂಘದ ಕಾರ್ಯವೈಖರಿಗಳ ಕುರಿತು ಸ್ವೀಕೃತವಾದ ದೂರು ಅರ್ಜಿಗಳ ಸಂಬಂಧ ಸಕ್ಷಮ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಪ್ರಸ್ತುತ ಸಂಸ್ಥೆಯು ಎಸ್.ಬಿ.ಐ ಬ್ಯಾಂಕ್, ಕಾವೇರಿ ಭವನ ಶಾಖೆಯಲ್ಲಿ ಹೊಂದಿರುವ ಬ್ಯಾಂಕ್ ಖಾತೆಯ ನಿರ್ವಹಣೆಯನ್ನು ಸ್ಥಗಿತಗೊಳಿಸಲಾಗಿರುತ್ತದೆ. ಇದರಿಂದಾಗಿ ಸಂಘದ ಸಿಬ್ಬಂದಿಗಳಿಗೆ ಸುಮಾರು 10 ತಿಂಗಳುಗಳಿಂದ ವೇತನವನ್ನು ಸಹ ಪಾವತಿಸಿರುವುದಿಲ್ಲವೆಂದು ತಿಳಿಸಿರುತ್ತಾರೆಂದು ಹಾಗೂ ಸಂಘದ ಅಧ್ಯಕ್ಷರು/ಕಾರ್ಯದರ್ಶಿಯವರ ಬಗ್ಗೆ ವಿಚಾರಿಸಲಾಗಿ, ಸಂಘದ ಅಧ್ಯಕ್ಷರಾಗಿದ್ದಂತಹ ಶ್ರೀ ಮೋಹನ್ ಕುಮಾರ್ ರವರು ಸುಮಾರು 6 ತಿಂಗಳ ಹಿಂದೆಯೇ ರಾಜೀನಾಮೆಯನ್ನು ನೀಡಿರುವುದಾಗಿ ತಿಳಿಸಿ, ಪ್ರಸ್ತುತ ಹಿಂದಿನ ಜಂಟಿ ಕಾರ್ಯದರ್ಶಿಯಾಗಿದ್ದ ಶ್ರೀ ಗವಿಕುಮಾರ್ ಇವರು ಪ್ರಭಾರ ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ ಹಾಗೂ ಸಂಘದ ಉಪನಿಯಮವನ್ನು ಪರಿಶೀಲಿಸಲಾಗಿ, ಸಂಘದ ಕಾರ್ಯಕಾರಿ ಸಮಿತಿಗೆ ಕರ್ನಾಟಕ ರಾಜ್ಯಾದ್ಯಂತ ಮೂರು ಹಂತಗಳಲ್ಲಿ ಚುನಾವಣಾ ಪ್ರಕ್ರಿಯೆಯನ್ನು ನಡೆಸಬೇಕಾಗಿದ್ದು, ಬೆಂಗಳೂರು ನಗರ ಮತ್ತು ಗ್ರಾಮಾಂತರದಲ್ಲಿ 15 ಹಾಗೂ ರಾಜ್ಯಾದ್ಯಂತ ವಿಭಾಗಕ್ಕೆ ಒಬ್ಬರಂತೆ 79 ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯರನ್ನು ಅಂದರೆ ಒಟ್ಟು 94 ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯರನ್ನು ಚುನಾವಣಾ ಮುಖಾಂತರ ಆಯ್ಕೆ ಮಾಡಬೇಕಾಗಿರುತ್ತದೆ. ತದನಂತರ ಚುನಾಯಿತರಾದ ಈ 94 ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯರುಗಳು ಸಮಿತಿಯ

ಕೇಂದ್ರ ಕಾರ್ಯನಿರ್ವಾಹಕ ಸಮಿತಿಯನ್ನು ಆಯ್ಕೆ ಮಾಡಬೇಕಾಗಿರುತ್ತದೆ. ಈ ಪ್ರಕ್ರಿಯೆಗಳನ್ನು ನಡೆಸಲು ಸುಮಾರು 2 ರಿಂದ 3 ತಿಂಗಳುಗಳ ಕಾಲಾವಕಾಶದ ಅಗತ್ಯತೆ ಇರುತ್ತದೆ ಹಾಗೂ ಸಂಘದ ಸಿಬ್ಬಂದಿಗಳು ಒದಗಿಸಿದ ಮಾಹಿತಿಯ ಪ್ರಕಾರ ಕರ್ನಾಟಕ ರಾಜ್ಯಾದ್ಯಂತ ಸಂಸ್ಥೆಯಲ್ಲಿ ಸುಮಾರು 10 ಸಾವಿರ ಸದಸ್ಯರುಗಳು ಇರುವುದು ತಿಳಿದುಬಂದಿರುತ್ತದೆ. ಈ 10 ಸಾವಿರ ಸದಸ್ಯರನ್ನು ಒಳಗೊಂಡಂತೆ ಸಂಸ್ಥೆಯ ಕಾರ್ಯಕಾರಿ ಸಮಿತಿಗೆ ರಾಜ್ಯಾದ್ಯಂತ ಚುನಾವಣಾ ಪ್ರಕ್ರಿಯೆಗಳನ್ನು ನಡೆಸಲು ತಗಲುವ ವೆಚ್ಚವನ್ನು ಸಂಸ್ಥೆಯಿಂದ ಭರಿಸಬೇಕಾಗಿರುವುದರಿಂದ ಪ್ರಸ್ತುತ ಕಾರ್ಯಕಾರಿ ಸಮಿತಿಯವರ ಅವಧಿಯು ಕೇವಲ 25 ದಿನಗಳಲ್ಲಿ ಅಂತ್ಯಗೊಳ್ಳುತ್ತಿರುವುದರಿಂದ ಹಾಗೂ ಹಾಲಿ ಸಂಸ್ಥೆಯ ಬ್ಯಾಂಕ್ ಖಾತೆ ಸ್ಥಗಿತಗೊಂಡಿರುವುದರಿಂದ ಸಂಸ್ಥೆಯ ಕಾರ್ಯಕಾರಿ ಸಮಿತಿಗೆ ಚುನಾವಣೆ ನಡೆಸಲು ಕಷ್ಟಸಾಧ್ಯವಾಗುತ್ತದೆ. ಆದಕಾರಣ ಸಂಸ್ಥೆಯ ಕಾರ್ಯಕಾರಿ ಸಮಿತಿಗೆ ಚುನಾವಣೆ ಜರುಗಿಸಲು ಕಷ್ಟಸಾಧ್ಯವಾಗಿರುವುದರಿಂದ ಚುನಾವಣೆ ಪ್ರಕ್ರಿಯೆಗಳನ್ನು ರಾಜ್ಯಾದ್ಯಂತ ನಡೆಸುವ ಸಂಬಂಧ ತಗಲುವ ವೆಚ್ಚಗಳನ್ನು ಭರಿಸಲು ಸಂಸ್ಥೆಯ ಬ್ಯಾಂಕ್ ಖಾತೆಯ ನಿರ್ವಹಣೆ ಅಗತ್ಯತೆಯಿರುವುದರಿಂದ ಚುನಾವಣೆಗೆ ತಗಲುವ ವೆಚ್ಚಗಳಿಗೆ ಸೂಕ್ತ ವ್ಯವಸ್ಥೆ ಮಾಡಿಕೊಡಲು ಚುನಾವಣಾಧಿಕಾರಿಗಳು ಕೋರಿರುವ ಹಿನ್ನೆಲೆಯಲ್ಲಿ, ಜಿಲ್ಲಾ ನೋಂದಣಾಧಿಕಾರಿಗಳು ಸಂಘದ ಕಾರ್ಯಕಾರಿ ಸಮಿತಿಗೆ ರಾಜ್ಯಾದ್ಯಂತ 3 ಹಂತಗಳಲ್ಲಿ ಚುನಾವಣೆ ನಡೆಸಲು ಸುಮಾರು 2 ರಿಂದ 3 ತಿಂಗಳುಗಳ ಕಾಲಮಿತಿಯ ಅವಶ್ಯಕತೆ ಇರುವುದರಿಂದ ಚುನಾವಣಾ ಪ್ರಕ್ರಿಯೆ ನಡೆಸಲು ತಗಲುವ ವೆಚ್ಚಗಳನ್ನು ಭರಿಸಲು ಸಂಸ್ಥೆಯ ಬ್ಯಾಂಕ್ ಖಾತೆ ಸ್ಥಗಿತವಾಗಿರುವುದರಿಂದ ಸಂಘಕ್ಕೆ ಆಡಳಿತಾಧಿಕಾರಿಯವರನ್ನು ನೇಮಿಸಿ, ಆಡಳಿತಾಧಿಕಾರಿಯ ಮುಖಾಂತರ ಬ್ಯಾಂಕ್ ಖಾತೆಯ ನಿರ್ವಹಣೆಯನ್ನು ನಡೆಸಿ, ಸಂಸ್ಥೆಯ ಚುನಾವಣಾ ಪ್ರಕ್ರಿಯೆಗಳನ್ನು ನಡೆಸುವುದು ಸೂಕ್ತವಾಗಿರುತ್ತದೆ ಎಂದು ಅಭಿಪ್ರಾಯಪಟ್ಟು ಸಂಘಕ್ಕೆ ಆಡಳಿತಾಧಿಕಾರಿಗಳನ್ನು ನೇಮಿಸಲು ಉಪನಿಬಂಧಕರು ಹಾಗೂ ಜಿಲ್ಲಾ ನೋಂದಣಾಧಿಕಾರಿ, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರು ಪ್ರಸ್ತಾವನೆಯನ್ನು ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆ ಮತ್ತು ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪ ನಿಬಂಧಕರು, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ, ಇವರು ಮಾಡಿರುವ ಶಿಫಾರಸ್ಸನ್ನು ಪರಿಶೀಲಿಸಲಾಗಿ, ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಕೇಂದ್ರ ಸಮಿತಿ, ಕೆ.ಆರ್.ವೃತ್ತ, ಬೆಂಗಳೂರು ಸಂಘದ ಆಡಳಿತ ಮಂಡಳಿಯ ಅವಧಿಯು ಮುಕ್ತಾಯಗೊಂಡಿದ್ದು, ಸಂಘದಲ್ಲಿ ನೈಜ ಆಡಳಿತ ಮಂಡಳಿ ಅಸ್ತಿತ್ವದಲ್ಲಿ ಇಲ್ಲದ ಕಾರಣ, ಸಂಘದ ಚುನಾವಣೆಯನ್ನು ನಡೆಸುವ ನಿಟ್ಟಿನಲ್ಲಿ ಮತ್ತು ಸಂಘದ ದೈನಂದಿನ ಆಡಳಿತದ ಹಿತದೃಷ್ಟಿಯಿಂದ ಪತ್ರದಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ಮಂಡಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ ಕೇಂದ್ರ ಸಮಿತಿ, ಕೆ.ಆರ್.ವ್ಯತ್ತ, ಬೆಂಗಳೂರು-560001 ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ನೇತೃತ್ವದಲ್ಲಿ ಸಂಘದ ಬೈಲಾ ರೀತ್ಯ ಚುನಾವಣೆ ನಡೆಸಿ, ನೂತನ ಚುನಾಯಿತ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಮನಗಂಡು, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ-1960ರ ಕಲಂ.27(ಎ) ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಸರ್ಕಾರದ ಆದೇಶ ಸಂಖ್ಯೆ: ಸಿಒ 113 ಸಿಎಸ್‌ಆರ್ 2025
ಬೆಂಗಳೂರು, ದಿನಾಂಕ:27ನೇ ಜನವರಿ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ.27-ಎ ರನ್ವಯ ಕರ್ನಾಟಕ ವಿದ್ಯುಚ್ಛಕ್ತಿ ಮಂಡಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ ಕೇಂದ್ರ ಸಮಿತಿ ಕೆ.ಆರ್.ವ್ಯತ್ತ, ಬೆಂಗಳೂರು-560001, ಈ ಸಂಘಕ್ಕೆ ಶ್ರೀ ಪ್ರಕಾಶ್‌ರಾವ್, ಸಹಕಾರ ಸಂಘಗಳ ಸಹಾಯಕ ನಿಬಂಧಕರು, 1ನೇ ವಲಯ, ಬೆಂಗಳೂರು ನಗರ ಜಿಲ್ಲೆ, ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ನಿಯಮಾನುಸಾರ ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎ.ಸಿ.ದಿವಾಕರ್)
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

PR-36

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59.

THAMMAIAH